- 9 -

ಮಿಸಲೇನಿಯಸ್ ಅರ್ಜಿ ಸಂ. : **17/2017**
**ಪಿ.ಡಬ್ಲ್ಯೂ : 01**

ದಿನಾಂಕ : **13.12.2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀಸವಾಲುಃ-ಎದುರುದಾರರ ಪರ ಶ್ರೀ.ಎನ್.ಕೆ. ವಕೀಲರಿಂದ ಃ-**

ನೀವು ಹಾಜರು ಪಡಿಸಿರುವ ನಿಪಿ-1 ಮತ್ತು 2 ರ ಫೋಟೋದಲ್ಲಿ ನೀವು ಯಾರಾದರೂ ಇದ್ದೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನಿಪಿ-1 ಮತ್ತು 2 ರ ಫೋಟೋವನ್ನು ಯಾರು ತೆಗೆದಿರುತ್ತಾರೆ ಎಂದರೆ ಸಾಕ್ಷಿ ನಾನು ತೆಗೆದಿರುವುದಿಲ್ಲವೆಂದು ನುಡಿಯುತ್ತಾರೆ. ಮರವನ್ನು ವಾಹನದಲ್ಲಿ ಎತ್ತಿಕೊಂಡು ಹೋಗಿರುತ್ತಾರೆ ಎಂದು ಹೇಳಿದ್ದು ಯಾವ ವಾಹನ ಎಂದರೆ ಸಾಕ್ಷಿ ಟೆಂಪೋ ಎಂದು ನುಡಿಯುತ್ತಾರೆ. ಯಾರು ಎತ್ತಿಕೊಂಡು ಹೋಗಿರುತ್ತಾರೆ ಎಂದರೆ ಸಾಕ್ಷಿ ಟ್ರ್ಯಾಕ್ಟರ್ ನವರು ಎಂದು ನುಡಿಯುತ್ತಾರೆ. ಆ ರೀತಿ ನಿಮ್ಮ ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿ ಬರೆಸಿರುತ್ತೀರಾ ಎಂದರೆ ಸಾಕ್ಷಿ ನ್ಯಾಯಾಲಯಕ್ಕೆ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ಟೆಂಪೋ ನಂಬರ್ ಹೇಳಲು ಬರುತ್ತದೆಯೇ ಎಂದರೆ ಸಾಕ್ಷಿ ನಾನು ಓದಿರಲಿಲ್ಲ ಎಂದು ನುಡಿಯುತ್ತಾರೆ. ಸದರಿ ವಾಹನದ ಬಣ್ಣ ಏನು ಎಂದರೆ ಸಾಕ್ಷಿ ಕೆಂಪು ಇತ್ತು ಎಂದು ನುಡಿಯುತ್ತಾರೆ. ಸದರಿ ವಾಹನದ ಬಣಣ ಹಾಗೂ ಇಂಥವರೇ ಎತ್ತಿಕೊಂಡು ಹೋಗಿರುತ್ತಾರೆ ಎಂದು ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ಹಾಗೂ ಅರ್ಜಿಯಲ್ಲಿ ಬರೆಸಿರುತ್ತೀರಾ ಎಂದರೆ ಸಾಕ್ಷಿ ಅದೇನು ಹೇಳಿರುವುದಿಲ್ಲವೆಂದು ನುಡಿಯುತ್ತಾರೆ. ಆ ಸಮಯದಲ್ಲಿ ಎಷ್ಟು ಜನರು ಇದ್ದರು ಎಂದು ಆ ಸಂಬಂಧ ಫೋಟೋವನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೀರಾ

ಎಂದರೆ ಸಾಕ್ಷಿ ಹಾಜರು ಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಇಂಥಹ ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ ಎಂದು ಅರ್ಜಿಯಲ್ಲಿ ಹಾಗೂ ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿ ಹೇಳಿರುವುದಿಲ್ಲವೆಂದರೆ ಸಾಕ್ಷಿ ಹೇಳಿರುತ್ತೇನೆ ಎಂದು ನುಡಿಯುತ್ತಾರೆ.

ನಿಮ್ಮ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಪ್ಯಾರಾ 4 ರಲ್ಲಿ ದಿನಾಂಕ 26.06.2017 ರಂದು ದಾವಾ 2 ನೇ ಐಟಂ ಸ್ವತ್ತಾದ ಸರ್ವೆ ನಂಬರ್ 36/4 ರಲ್ಲಿ ಬೆಲೆ ಬಾಳುವ ಹುಣಸೇ ಮರವನ್ನು ಕಡಿದು ಸಾಗಾಟ ಮಾಡಿರುತ್ತಾರೆ ಎಂದು ಹೇಳಿದ್ದು ಆ ಸಂಬಂಧ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೀರಾ ಎಂದರೆ ಸಾಕ್ಷಿ ಹಾಜರು ಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಅರ್ಜಿ ಮತ್ತು ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿ ಹುಣಸೆಮರಗಳ ಬೆಲೆಯನ್ನು ನೀವೆ ನಿಗಧಿ ಮಾಡಿ ಹಾಕಿರುತ್ತೀರಿ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಯಾವುದೇ ರೀತಿಯ ಹುಣಸೆ ಮರ ಅಲ್ಲಿ ಇದ್ದಿರಲಿಲ್ಲ ಎಂದರೆ ಸಾಕ್ಷಿಯು ಇತ್ತು ಎಂದು ನುಡಿಯುತ್ತಾರೆ. ನೀವು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

ಯಾವ ದಿನಾಂಕದಂದು ದೂರನ್ನು ಕೊಟ್ಟಿರುತ್ತೀರಿ ಎಂದರೆ ಸಾಕ್ಷಿಯು ದಿನಾಂಕ 26, 2017 ನೇ ಇಸವಿಯಂದು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ, ಎಲ್ಲಿ ದೂರನ್ನು ಕೊಟ್ಟಿರುತ್ತೀರಿ ಎಂದರೆ ಸಾಕ್ಷಿ ತಾವರೆಕೆರೆಯಲ್ಲಿ ಎಂದು ನುಡಿಯುತ್ತಾರೆ. ಯಾರ ವಿರುದ್ದ ಕೊಟ್ಟಿರುತ್ತೀರಿ ಎಂದರೆ ಸಾಕ್ಷಿ ನಮ್ಮ ಅಣ್ಣನ ವಿರುದ್ದ ಎಂದು ನುಡಿಯುತ್ತಾರೆ. ದೂರನ್ನು ಕೊಟ್ಟ ಬಗ್ಗೆ ಕೂಲಂಕುಶವಾಗಿ ಪ್ರಮಾಣಪತ್ರದಲ್ಲಿ ಹೇಳಿರುತ್ತೀರಾ ಎಂದರೆ ಸಾಕ್ಷಿ ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ದೂರನ್ನು ಕೊಟ್ಟಾಗ ಪೋಲಿಸರು ಏನು ಮಾಡಿದರು ಎಂದರೆ ಸಾಕ್ಷಿ ನ್ಯಾಯಾಲಯದಿಂದ ಆದೇಶ ಆದ ಕಾಪಿಯನ್ನು

ಕೊಡಲು ಕೇಳಿದ್ದರು, ನಾನು ಕೊಟ್ಟಿರುತ್ತೇನೆ ನಂತರ ಅವರು ಒಂದು ಲೆಟರ್ ಅನ್ನು ಕೊಟ್ಟರು ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ನಿಪಿ-1 ರಿಂದ 3 ರ ದಾಖಲೆಗಳನ್ನು ತೋರಿಸಲಾಗಿ ಸದರಿ ಪೋಲಿಸರು ಕೊಟ್ಟ ಲೆಟರ್ ಇದೆಯೇ ಎಂದರೆ ಸಾಕ್ಷಿ ಇರುವುದಿಲ್ಲವೆಂದು ನುಡಿಯುತ್ತಾರೆ. ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲು ತೊಂದರೆ ಇರುವುದಿಲ್ಲವೆಂದರೆ ಸಾಕ್ಷಿ ಏನು ಸಮಸ್ಯೆ ಇರುವುದಿಲ್ಲವೆಂದು ನುಡಿಯುತ್ತಾರೆ. ದೂರನ್ನು ಕೊಟ್ಟ ನಂತರ ಪೋಲಿಸರು ನಿಮ್ಮ ಹಾಗೂ ಪ್ರತಿವಾದಿಗಳ ಹೇಳಿಕೆಯನ್ನು ಪಡೆದಿರುತ್ತಾರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಪೋಲಿಸರ ಹತ್ತಿರ ನೀವೇನಾದರೂ ಕೂಲಂಕುಶವಾಗಿ ಬರೆಸಿಕೊಂಡು ಬಂದಿರುತ್ತೀರಾ ಎಂದರೆ ಸಾಕ್ಷಿ ಪೋಲಿಸ್ ಠಾಣೆಗೆ ಹೋಗಿರುವುದಿಲ್ಲವೆಂದು ನುಡಿಯುತ್ತಾರೆ. ನೀವು ಯಾವುದೇ ದೂರನ್ನು ಕೊಟ್ಟಿರುವುದಿಲ್ಲವೆಂದರೆ ಸಾಕ್ಷಿಯು ನಾವು ಮರ ಕಡಿದ ಬಗ್ಗೆ ಪೋಲಿಸ್ ಠಾಣೆಯಲ್ಲಿ ದೂರನ್ನು ಕೊಟ್ಟಿರುತ್ತೇವೆ ಎಂದು ನುಡಿಯುತ್ತಾರೆ. ಸದರಿ ದೂರಿನ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೀರಾ ಎಂದರೆ ಸಾಕ್ಷಿ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ.

ಈಗ ಸಾಕ್ಷಿಗೆ ನಿಪಿ-1 ರಿಂದ 3 ರ ದಾಖಲೆಗಳನ್ನು ತೋರಿಸಲಾಗಿ ಸದರಿ ದೂರು ಎಲ್ಲಿ ಇರುತ್ತದೆ ಎಂದರೆ ಸಾಕ್ಷಿ ಸದರಿ ನಿಪಿ-1 ರಿಂದ 3 ರ ದಾಖಲೆಗಳನ್ನು ನಾವು ಕೊಟ್ಟಿರುವುದಿಲ್ಲವೆಂದು ನುಡಿಯುತ್ತಾರೆ. ನೀವು ಯಾವುದೇ ದೂರನ್ನು ಕೊಟ್ಟಿರುವುದಿಲ್ಲ ಹಾಗೂ ಆ ಸಂಬಂಧ ಯಾವುದೇ ಅರ್ಜಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುವುದಿಲ್ಲವೆಂದರೆ ಸಾಕ್ಷಿ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಏಕೆಂದರೆ ಅಲ್ಲಿ ಯಾವುದೇ ಹುಣಸೆ ಮರಇದ್ದಿರಲಿಲ್ಲ ಹಾಗೂ ಯಾವುದೇ ಮರವನ್ನು ಕಡಿದಿರುವುದಿಲ್ಲ ಪ್ರತಿವಾದಿಗಳಿಗೆ ತೊಂದರೆ ಕೊಡಬೇಕೆಂಬ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲವೆಂದು ನುಡಿಯುತ್ತಾರೆ.

ನ್ಯಾಯಾಲಯಕ್ಕೆ ಸುಳ್ಳು ಅರ್ಜಿಯನ್ನು ಸಲ್ಲಿಸಿ ಹಾಗೂ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲವೆಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಪ್ರ. ಸಿ. ಜ. ಮತ್ತು ಜೆ. ಎಂ. ಎಫ್?ಸಿ. ಮಾಗಡಿ.**